ಕೇಂದ್ರ ಸರ್ಕಾರದಿಂದ ಎಸ್‌ಸಿ / ಎಸ್‌ಟಿ ಜನರ ಅಭಿವೃದ್ಧಿಗಾಗಿ ಒದಗಿಸಲಾದ ಹಣ

2024 (2436) : ಶ್ರೀ ಅಂಗಾರ ಎಸ್. (ಸುಳ್ಯ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

(ಅ) ಪರಿಶಿಷ್ಟ ಜಾತಿ : ಪರಿಶಿಷ್ಟ ಪಂಗಡಗಳ ಅಭಿವೃದ್ಧಿಗಾಗಿ ಕೇಂದ್ರ ಸರ್ಕಾರ ಯಾವ ಯಾವ ಯೋಜನೆಯಡಿಯಲ್ಲಿ ಎಷ್ಟೆಷ್ಟು ಹಣ ರಾಜ್ಯ ಸರ್ಕಾರಕ್ಕೆ ಒದಗಿಸಲಾಗಿದೆ.

(ಪೂರ್ಣ ವಿವರ ನೀಡುವುದು)

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು) :

(ಅ) 1999-2000ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಅಭಿವೃದ್ಧಿಗಾಗಿ ಕೇಂದ್ರ ಸರ್ಕಾರವು ಬಿಡುಗಡೆ ಮಾಡಿರುವ ಹಣದ ಬಗ್ಗೆ ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.

ಅನುಬಂಧ

ಕೇಂದ್ರ ಸರ್ಕಾರವು 1999-2000ನೇ ಸಾಲಿನಲ್ಲಿ ಬಿಡುಗಡೆ ಮಾಡಿರುವ ಹಣದ ಬಗ್ಗೆ ವಿವರಗಳು

ಕ್ರಮ ಸಂಖ್ಯೆ	ಕಾರ್ಯಕ್ರಮ	.ಬಿಡುಗಡೆಯಾದ ಹಣ ರೂ.
	ಪರಿಶಿಷ್ಟ ಜಾತಿಯವರಿಗಾಗಿ	
1.	ತರಬೇತಿ ಮತ್ತು ಸಂಬಂಧಪಟ್ಟ ಇತರೆ ಯೋಜನೆಗಳು	1.19
2.	ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣ	205.
3.	ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗಾಗಿ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ	1044.45
4.	ಅನೈರ್ಮಲ್ಯ ವೃತ್ತಿಯಲ್ಲಿ ತೊಡಗಿರುವವರ ಮಕ್ಕಳಿಗಾಗಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ	-
5.	ಇಂಜಿನಿಯರಿಂಗ್ ಮತ್ತು ವೈದ್ಯಕೀಯ ವಿದ್ಯಾರ್ಥಿಗಳಿಗಾಗಿ ಪುಸ್ತಕ ಭಂಡಾರ	57.50
6.	ಅಸ್ಪೃಶ್ಯತಾ ನಿವಾರಣೆ (ಅಂತರ್‌ಜಾತಿ ವಿವಾಹಕ್ಕೆ ಪ್ರೋತ್ಸಾಹಧನ)	69.92
7.	ಸೆಮಿನಾರ್‌ಗಳು ಮತ್ತು ಕಮ್ಮಟಗಳನ್ನು ನಿರ್ಮಿಸುವುದು	5.00

8.	ನಾಗರೀಕ ಹಕ್ಕು ಜಾರಿ ನಿರ್ದೇಶನಾಲಯ.	15.00
9.	ದೌರ್ಜನ್ಯಕ್ಕೊಳಪಟ್ಟ ಪರಿಶಿಷ್ಟ ಜಾತಿ : ಪರಿಶಿಷ್ಟ ವರ್ಗದವರಿಗೆ ಪರಿಹಾರಧನ	80.78
10.	ಕರ್ನಾಟಕ ಪರಿಶಿಷ್ಟ ಜಾತಿ : ಪರಿಶಿಷ್ಟ ಅಭಿವೃದ್ಧಿ ನಿಗಮ-ಬಂಡವಾಳ ಹೂಡಿಕೆ	-
11.	ವಿಶೇಷ ಘಟಕ ಯೋಜನೆಗೆ ವಿಶೇಷ ಕೇಂದ್ರೀಯ ಸಹಾಯ	2097.36
	ಒಟ್ಟು	3576.64

ಪರಿಶಿಷ್ಟ ವರ್ಗದವರಿಗಾಗಿ

1.	ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ	-
2.	ಗಿರಿಜನ ಉಪ ಯೋಜನೆಗೆ ವಿಶೇಷ ಕೇಂದ್ರಿಯ ಸಹಾಯಧನ	410.99
3.	ಭಾರತ ಸಂವಿಧಾನದ ಅನುಚ್ಛೇದ 275 (1) ರಡಿ	280.03

ರಾಜ್ಯದಲ್ಲಿ ಸಣ್ಣ ಕೈಗಾರಿಕೆಯ ಉತ್ಪನ್ನಗಳಿಗೆ ಮಾರುಕಟ್ಟೆ ಸೌಲಭ್ಯ

2025 (2488) : ಶ್ರೀ ಆತ್ಮಾನಂದ ಎಂ. ಎಸ್. (ಮಂಡ್ಯ) : ಮಾನ್ಯ ಸಣ್ಣ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

(ಅ) ರಾಜ್ಯದಲ್ಲಿ ನೋಂದಣಿಯಾಗಿರುವ ಸಣ್ಣ ಪ್ರಮಾಣದ ಕೈಗಾರಿಕೆಗಳ ಸಂಖ್ಯೆ ಎಷ್ಟು?

(ಆ) ಸಣ್ಣ ಪ್ರಮಾಣದ ಕೈಗಾರಿಕಾ ಉತ್ಪನ್ನಗಳಿಗೆ ಮಾರುಕಟ್ಟೆ ಸೌಲಭ್ಯವನ್ನು ಸರ್ಕಾರವು ನೀಡುತ್ತಿದೆಯೇ?

(ಇ) ಹಾಗಿದ್ದಲ್ಲಿ, ಮಾರುಕಟ್ಟೆ ಸೌಲಭ್ಯವನ್ನು ದೊರಕಿಸಿಕೊಡಲು ಸರ್ಕಾರವು ಯಾವ ಕ್ರಮವನ್ನು ಕೈಗೊಂಡಿದೆ?

ಶ್ರೀ ಎನ್. ಆರ್. ಕಾಶಪ್ಪನವರ್ (ಸಣ್ಣ ಕೈಗಾರಿಕಾ ಸಚಿವರು) :

(ಅ) ಜನವರಿ 2000 ಅಂತ್ಯಕ್ಕೆ 2.48 ಲಕ್ಷ ಸಣ್ಣ ಪ್ರಮಾಣದ ಕೈಗಾರಿಕೆಗಳು ನೋಂದಣಿಯಾಗಿರುತ್ತವೆ.

(ಆ) ಹೌದು

(ಇ) ಸಣ್ಣ ಪ್ರಮಾಣದ ಕೈಗಾರಿಕೆಗಳು ಉತ್ಪಾದಿಸುವ ವಸ್ತುಗಳನ್ನು ಸರ್ಕಾರವೇ ಮಾರಾಟ ಮಾಡುವುದು ಕಷ್ಟ ಸಾಧ್ಯ. ಉದ್ದಿಮೆಗಳು ತಾವು ಉತ್ಪಾದಿಸುವ ವಸ್ತುಗಳಿಗೆ ಮಾರುಕಟ್ಟೆ ಇದೆಯೇ ಎಂಬುದನ್ನು ಪರಿಶೀಲಿಸಿ ಪ್ರಾರಂಭಿಸುವುದು ಅವರ ಜವಾಬ್ದಾರಿಯಾಗಿರುತ್ತದೆ. ಆದರೂ ಸಹ ಕರ್ನಾಟಕ ಸರ್ಕಾರ ಸರ್ಕಾರಿ ಆದೇಶವನ್ನು ಹೊರಡಿಸಿ ಖರೀದಿ ಆದ್ಯತೆ ಶೇ. 15 ರಷ್ಟು